ಗುರುತಿಲ್ಲದ ಪ್ರಶ್ನೆ ಸಂಖ್ಯೆ 167 ದಿನಾಂಕ 01-02-2007ರಂದು ತಿಳಿಸಿದ್ದು ಈವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರಕಾರದ ಗಮನದಲ್ಲಿದೆಯೇ

ಈ) ಹಾಗಿದ್ದಲ್ಲಿ, ಶಾಶ್ವತ ಆಯೋಗವನ್ನು ರಚಿಸಿ ಅಧ್ಯಕ್ಷರು, ಸದಸ್ಯರನ್ನು ನೇಮಕ ಮಾಡಿ ಸಮೀಕ್ಷಾ ಕಾರ್ಯವನ್ನು ಪಡೆದು ವರದಿಯನ್ವಯ ಮುಂದಿನ ಕ್ರಮವನ್ನು ತೆಗೆದುಕೊಳ್ಳಲು ಸರಕಾರ ಯಾವ ಕ್ರಮ ಕೈಗೊಳ್ಳುತ್ತದೆ ?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) –

ಅ) ನ್ಯಾಯಮೂರ್ತಿ ಶ್ರೀ ಎ ಜೆ ಸದಾಶಿವ ವಿಚಾರಣಾ ಆಯೋಗದ ವರದಿಯು ಇನ್ನೂ ಸ್ವೀಕೃತವಾಗಿರುವುದಿಲ್ಲ ಆದ್ದರಿಂದ, ಈ ಹಂತದಲ್ಲಿ ಮುಂದಿನ ಕ್ರಮ ಜರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ

ಆ) ವರದಿಯನ್ನು ನೀಡಲು ದಿನಾಂಕ 23-09-2007ರ ವರೆಗೆ ಕಾಲಾವಕಾಶವಿದ್ದು, ಸರ್ಕಾರಕ್ಕೆ ವರದಿ ಸಲ್ಲಿಸಲ್ಪಟ್ಟ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು

ಇ) ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಅಧ್ಯಕ್ಷರು ಹಾಗೂ ಓರ್ವ ಸದಸ್ಯರನ್ನು ನೇಮಿಸಿ ದಿನಾಂಕ 10-07-07 ರಂದು ಅಧಿಸೂಚನೆಯನ್ನು ಹೊರಡಿಸಿದ್ದು, ಅವರುಗಳು ಕಾರ್ಯಭಾರವನ್ನು ವಹಿಸಿಕೊಂಡಿದ್ದಾರೆ

ಈ) ಪೂರ್ಣ ಪ್ರಮಾಣದಲ್ಲಿ ಆಯೋಗದ ಪುನರ್ ರಚನೆ ಮಾಡಿದ ನಂತರ ಮನೆ ಮನೆ ಸಮೀಕ್ಷಾ ಕಾರ್ಯ ಕುರಿತು ಸೂಕ್ತ ಕ್ರಮವನ್ನು ಆಯೋಗ ತೆಗೆದುಕೊಳ್ಳುವುದು ಸರ್ಕಾರಕ್ಕೆ ವರದಿ ಸಲ್ಲಿಸಿದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು

682 (460) ಶ್ರೀ ಸೋಮಣ್ಣ ವಿ (ಬಿನ್ನಿಪೇಟೆ) – ವೈದ್ಯಕೀಯ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) 2006-07ರಲ್ಲಿ ಹೊಸದಾಗಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಎಲ್ಲೆಲ್ಲಿ ಪ್ರಾರಂಭಿಸಲಾಯಿತು ,

ಆ) ಇದರಿಂದ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಸಿಕ್ಕಲು ಅವಕಾಶವಾಯಿತು ,

ಇ) 2007-08ರಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವುದಕ್ಕಾಗಿ, ಎಂ ಸಿ ಐ ಹಾಗೂ ಕೇಂದ್ರ ಸರ್ಕಾರದ ಅನುಮತಿ ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ?

ಡಾ ವಿ ಎಸ್ ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) –

ಅ) ಹಾಸನ, ಮಂಡ್ಯ ಮತ್ತು ಬೆಳಗಾಂ

ಆ) 300

ಇ) 2007–08ನೇ ಸಾಲಿನಲ್ಲಿ ಶಿವಮೊಗ್ಗ, ಬೀದರ್ ಮತ್ತು ರಾಯಚೂರುಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡಿ ಪ್ರತಿ ಕಾಲೇಜಿಗೆ 100 ಸೀಟುಗಳಂತೆ ಪ್ರವೇಶ ನಿಗದಿಪಡಿಸಿ ಭಾರತೀಯ ವೈದ್ಯಕೀಯ ಪರಿಷತ್ತಿನ ಶಿಫಾರಸ್ಸಿನ ಮೇರೆಗೆ ಕೇಂದ್ರ ಸರ್ಕಾರದವರು ದಿನಾಂಕ 13–07–2007ರಂದು ಅನುಮತಿ ನೀಡಿರುತ್ತಾರೆ ಅದರಂತೆ ಈ ವೈದ್ಯಕೀಯ ಕಾಲೇಜುಗಳನ್ನು ಈ ವರ್ಷ ಪ್ರಾರಂಭಿಸಲಾಗುವುದು

683 (1012) ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ) – ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಮೇಲ್ದರ್ಜೆಗೇರಿಸಿರುವ ಬಾಗೇಪಲ್ಲಿ ಮತ್ತು ಗುಡಿಬಂಡೆ ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಈ ಆಸ್ಪತ್ರೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) –

ಅ) 2006–07ನೇ ಸಾಲಿನಲ್ಲಿ ಈ ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಿರುವುದರಿಂದ 2007–08ನೇ ಸಾಲಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕಾಗಿರುತ್ತದೆ

ಆ) ಇದಕ್ಕೆ ಕಟ್ಟಡದ ಕಾಮಗಾರಿಯನ್ನು 2007–08 ನೇ ಸಾಲಿನಲ್ಲಿ ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ ಇದಕ್ಕೆ ಅಗತ್ಯವಾಗಿರುವ ಸಿಬ್ಬಂದಿಗಳನ್ನು ಹಾಗೂ ಉಪಕರಣಗಳನ್ನು ಕಟ್ಟಡ ಕಾಮಗಾರಿ ಮುಗಿದ ನಂತರ ಪೂರೈಸಲು ಕ್ರಮ ಕೈಗೊಳ್ಳಲಾಗುವುದು

684 (1013) ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ) – ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಬಾಗೇಪಲ್ಲಿಯ ಸರ್ಕಾರಿ ಐಟಿಐ ಗೆ ಸ್ವಂತ ಕಟ್ಟಡ ಇಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,